ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ : ಕಾಶಿಇ/ಸುತ್ತೋಲೆ/ಸ.ಪ್ರ.ದ.ಕಾ/ಆಯವ್ಯಯ/04/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ: 13.02.2024

ಇವರಿಗೆ,

ಇಲಾಖಾ ವ್ಯಾಪ್ತಿಯ ಎಲ್ಲಾ ಡಿಡಿಒಗಳಿಗೆ,

ಮಾನ್ಯರೆ,

ವಿಷಯ: 2023-24ನೇ ಸಾಲಿಗೆ ಬಿಡುಗಡೆ ಮಾಡಿರುವ ಅನುದಾನ ಬಳಕೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ ಆಇ 38 ಬಿ.ಪಿ.ಇ 2023 ಬೆಂಗಳೂರು ದಿನಾಂಕ 20.12.2023 & 23.01.2024

*****

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ 2023-24ನೇ ಸಾಲಿಗೆ ವೇತನ ಮತ್ತು ವೇತನೇತರ ವೆಚ್ಚಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಆರ್ಥಿಕ ಇಲಾಖೆಯು ನಿಗದಿಪಡಿಸಿರುವ ಕಾಲಮಿತಿಯೊಳಗೆ ಬಳಕೆ ಮಾಡಲು ಸೂಚಿಸಲಾಗಿದೆ.

ಮುಂದುವರೆದು ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳು/ ಖಾಸಗಿ ಅನುದಾನಿತ ಪದವಿ, ಬಿ.ಎಡ್, ಚಿತ್ರಕಲಾ ಮತ್ತು ಕಾನೂನು ಕಾಲೇಜುಗಳ ಬೋಧಕರು ಮತ್ತು ಬೋಧಕೇತರರಿಗೆ ಫೆಬ್ರುವರಿ -2024ರ ವರೆಗಿನ ವೇತನ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಲಾಗಿದೆ.

ಇಲಾಖಾ ವ್ಯಾಪ್ತಿಯ ಎಲ್ಲಾ ಡಿಡಿಒಗಳು ವೇತನ ಪಾವತಿಗಾಗಿ ಬಿಡುಗಡೆ ಆಗಿರುವ ಅನುದಾನವನ್ನು ಬಳಕೆ ಮಾಡಿಕೊಂಡು ಎಲ್ಲಾ ಅರ್ಹ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಸಕಾಲದಲ್ಲಿ ವೇತನ ಪಾವತಿಸಲು ಅಗತ್ಯ ಕ್ರಮವಹಿಸುವುದು. ಪ್ರಸಕ್ತ ಸಾಲಿಗೆ ಬಿಡುಗಡೆ ಆಗಿರುವ ಅನುದಾನ ಬಳಕೆ ಮಾಡದೇ ಮುಂದಿನ ಆರ್ಥಿಕ ಸಾಲಿನಲ್ಲಿ ಮತ್ತೊಮ್ಮೆ ಅನುದಾನ ಕೋರಿದ್ದಲ್ಲಿ, ಸದರಿ ಬೇಡಿಕೆಯನ್ನು ಪರಿಗಣಿಸುವುದಿಲ್ಲ, ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳನ್ನೇ ಜವಾಬ್ದಾರರನ್ನಾಗಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ತಮ್ಮ ವಿಶ್ವಾಸಿ,

13/2/24

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಪ್ರತಿ:-ಮ್ಯಾನೇಜರ್ / ಅಧೀಕ್ಷಕರು, ಮಾಹಿತಿ ತಂತ್ರಜ್ಞಾನ ವಿಭಾಗ ಕಾಶಿಇ ಬೆಂಗಳೂರು-ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು